ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE : 17/9/20

# ಸಿಎಂ ಪರಿಹಾರ ನಿಧಿ ನಿರ್ವಹಣೆಗೆ ತಂತ್ರಾಂಶ

## ಸಿಎಂ ಯಡಿಯೂರಪ್ಪ ಚಾಲನೆ | ಇಂಟರ್ನೆಟ್ ಮೂಲಕ ಇನ್ನು ನಿಧಿ ನಿರ್ವಹಣೆ | ತಂತ್ರಾಂಶದ ಮೂಲಕವೇ ಪರಿಹಾರ ವರ್ಗಾವಣೆ ಸಾಧ್ಯ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 17/9/20

ಮುಖ್ಯಮಂತ್ರಿಗಳ ಪರಿಹಾರ ನಿಧಿಯ ದೈನಂದಿನ ಕಾರ್ಯ ವಿಧಾನಗಳನ್ನು ಅಂತರ್ಜಾಲದ ಮೂಲಕ ನಿರ್ವಹಿಸಲು ಸಿದ್ಧಪಡಿಸಿರುವ ತಂತ್ರಾಂಶವನ್ನು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಲೋಕಾರ್ಪಣೆ ಮಾಡಿದರು.

ಮಂಗಳವಾರ ಗೃಹ ಕಚೇರಿ ಕೃಷ್ಣಾದಲ್ಲಿ ನಡೆದ ಕಾರ್ಯಕ್ರಮದಲ್ಲಿ ನೂತನ ತಂತ್ರಾಂಶಕ್ಕೆ ಚಾಲನೆ ನೀಡಿಮಾತನಾಡಿದಅವರು,ನೈಸರ್ಗಿಕವಿಕೋಪಗಳ ಸಂದರ್ಭದಲ್ಲಿ ನೊಂದ ಸಂತ್ರಸ್ತರಿಗಾಗಿ ಹಾಗೂ ಹಾನಿಗೊಳಗಾದ ಪ್ರದೇಶಗಳ ಅಭಿವೃದ್ಧಿಗೆ ಕೂಡ ಪರಿಹಾರ ನಿಧಿಯ ಮೊತ್ತವನ್ನು ಬಳಸಲಾಗುತ್ತಿದೆ. ಸಾರ್ವಜನಿಕರು, ಸಂಘ ಸಂಸ್ಥೆಗಳು, ನಿಗಮ-ಮಂಡಳಿಗಳು ನೀಡುವ ದೇಣಿಗೆಯಿಂದ ಪರಿಹಾರಕಾರ್ಯಗಳನ್ನು ನಿರ್ವಹಿಸಬೇಕಾಗುತ್ತದೆ. ಹೀಗಾಗಿ ಈ ತಂತ್ರಾಂಶ ಸಹಕಾರಿಯಾಗಲಿದೆ ಎಂದರು.

ಸರ್ಕಾರಅಸ್ತಿತ್ವಕ್ಕೆಬಂದಾಗಿನಿಂದಇಲ್ಲಿಯವರೆಗೂ ಮುಖ್ಯಮಂತ್ರಿಗಳಪರಿಹಾರನಿಧಿಗೆಪರಿಹಾರಕೋರಿ ಒಟ್ಟು 14,275 ಅರ್ಜಿಗಳು ಸಲ್ಲಿಕೆಯಾಗಿದ್ದು, ಈ ಪೈಕಿ 11,530 ಪ್ರಕರಣಗಳಿಗೆ 61.88 ಕೋಟಿ ರು. ಅನ್ನು ಪರಿಹಾರವಾಗಿ ಬಿಡುಗಡೆ ಮಾಡಲಾಗಿದೆ. 587 ಪ್ರಕರಣಗಳಿಗೆ 9.16 ಕೋಟಿ ರು.ಗಳ ಭರವಸೆ ಪತ್ರಗಳನ್ನು ಸಂಬಂಧಿಸಿದ ಆಸ್ಪತ್ರೆಗಳ ಹೆಸರಿಗೆ ವಿತರಿಸಲಾಗಿದ್ದು, ಒಟ್ಟು 12,117 ಪ್ರಕರಣಗಳಿಗೆ 71.04ಕೋಟಿರು.ಗಳಪರಿಹಾರವನ್ನುವಿತರಿಸಲಾಗಿದೆ ಎಂದು ಹೇಳಿದರು.



ಬೆಂಗಳೂರಿನ ಗೃಹ ಕಚೇರಿ ಕೃಷ್ಣಾದಲ್ಲಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಮುಖ್ಯಮಂತ್ರಿಗಳ ಪರಿಹಾರ ನಿಧಿ ನಿರ್ವಹಣೆಗೆ ಸಿದ್ಧಪಡಿಸಿರುವ ನೂತನ ತಂತ್ರಾಂಶವನ್ನು ಲೋಕಾರ್ಪಣೆ ಮಾಡಿದರು.

2020 ಏಪ್ರಿಲ್‌ನಿಂದ ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ಪರಿಹಾರ ಕೋರಿ ಸಲ್ಲಿಸಲಾಗುವ ಅರ್ಜಿಗಳನ್ನು ಅಂತರ್ಜಾಲದ ಮೂಲಕ ಸ್ವೀಕರಿಸಿ ಪರಿಹಾರದ ಮೊತ್ತವನ್ನು ಡಿಬಿಟಿ ಯೋಜನೆಯ ಮೂಲಕ ವಿತರಿಸುವ ಕಾರ್ಯಕ್ಕೆ ಚಾಲನೆ ನೀಡಲಾಗಿದೆ. ಮಧ್ಯವರ್ತಿಗಳು ಬಡ ಅರ್ಜಿದಾರರನ್ನು ಶೋಷಿಸುವುದು ಹಾಗೂ ನಕಲಿ ಫಲಾನುಭವಿಗಳ ಹಾವಳಿಯನ್ನು ತಪ್ಪಿಸಿ, ಅರ್ಹ ಫಲಾನುಭವಿಗಳ ಅವಶ್ಯಕತೆಗೆ ತಕ್ಕಂತೆ ಶೀಘ್ರವಾಗಿ ಪರಿಹಾರಮೊತ್ತವನ್ನುತಲುಪಿಸುವುದುಈಯೋಜನೆ ಮುಖ್ಯ ಉದ್ದೇಶವಾಗಿದೆ.ಅರ್ಹಫಲಾನುಭವಿಗಳಿಗೆ ಸಹಾಯಧನ ನೀಡಿಕೆಯಲ್ಲಿ ಆಗಬಹುದಾದ ವಿಳಂಬವನ್ನು ತಡೆಯಲು ತಂತ್ರಾಂಶವು ಸಹಕಾರಿಯಾಗಲಿದೆ ಎಂದು ತಿಳಿಸಿದರು.

### ಇಂಟರ್‌ನೆಟ್ ಲಿಂಕ್

ಮುಖ್ಯಮಂತ್ರಿಗಳ ಪರಿಹಾರ ನಿಧಿ ಶಾಖೆಯ ಕಚೇರಿಗೆ ವಿದ್ಯುನ್ಮಾನ ಅರ್ಜಿ ಸಲ್ಲಿಸಲು ಅಂತರ್ಜಾಲ ಕೊಂಡಿ: cmrf.karnataka.gov.in ಹಾಗೂ https://sevasindhu.karnataka.gov.in ಸಂಪರ್ಕಿಸಬಹುದು.

ಬಿಪಿಎಲ್ ಪಡಿತರ ಚೀಟಿ ಮತ್ತು ಆಧಾರ್ ಗುರುತಿನ ಚೀಟಿಯ ಡಾಟಾವನ್ನು ಮಾನದಂಡವಾಗಿ ಉಪಯೋಗಿಸುತ್ತಿರುವ ಹಿನ್ನೆಲೆಯಲ್ಲಿ ಅರ್ಹ ಅರ್ಜಿದಾರರಿಗೆ ಯಾವುದೇ ವಿಳಂಬವಿಲ್ಲದೆ ನೇರವಾಗಿ ಅವರ ಬ್ಯಾಂಕ್ ಖಾತೆಗೆ ಪರಿಹಾರವನ್ನು ಈ ತಂತ್ರಾಂಶದ ಮೂಲಕ ಒದಗಿಸಬಹುದಾಗಿದೆ. ವಿಧಾನಸಭೆ,ವಿಧಾನಪರಿಷತ್‌ಸೇರಿದಂತೆಲೋಕಸಭೆ, ರಾಜ್ಯಸಭಾ ಸದಸ್ಯರಿಗೆ ಪ್ರತ್ಯೇಕ ಲಾಗಿನ್ ಒದಗಿಸಲಾಗಿರುವ ಹಿನ್ನೆಲೆಯಲ್ಲಿ ಅರ್ಜಿದಾರರು ನೇರವಾಗಿ ಶಾಸಕರ ಕಚೇರಿಗೆ ಅಥವಾ ಸಂಸದರ ಕಚೇರಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದಾಗಿದೆ ಎಂದರು.

ಬೆಂಗಳೂರು ಒನ್, ಕರ್ನಾಟಕ ಒನ್, ಬಾಪೂಜಿ ಸೇವಾಕೇಂದ್ರ, ಸೇವಾಸಿಂಧುಕೇಂದ್ರಗಳಲ್ಲಿಹಾಗೂ ಯಾವುದಾದರೂ ಅಂತರ್ಜಾಲ ಕೇಂದ್ರಗಳಲ್ಲಿ ಸಾರ್ವಜನಿಕರು ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದು. ಪರಿಹಾರ ಧನ ಬಿಡುಗಡೆ ವಿವರ ಇತ್ಯಾದಿಗಳನ್ನು ಮೊಬೈಲ್ ಸಂದೇಶದ ಮೂಲಕ ಮಾಹಿತಿ ಪಡೆಯಬಹುದಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಇ-ಆಡಳಿತ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ರಾಜೀವ್ ಚಾವ್ಲಾ, ಸಿಎಂ ಕಾರ್ಯದರ್ಶಿ ಸೆಲ್ವಕುಮಾರ್ ಉಪಸ್ಥಿತರಿದ್ದರು.